## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು- ತುಮಕೂರು ರೈಲ್ವೆ ನಿಲ್ದಾಣಗಳ ನಡುವಿನ ಕ್ಯಾತಸಂದ್ರ ಸ್ಟೇಷನ್ ಯಾರ್ಡ್ ನಲ್ಲಿ ಕಿ.ಮೀ. 64/200-300ರಲ್ಲಿ ಬರುವ ರೈಲ್ವೆ ಲೆವೆಲ್ ಕ್ರಾಸಿಂಗ್ ಗೇಟ್ ಸಂಖ್ಯೆ: 37 ರ ಬದಲಿಗೆ ರಸ್ತೆ ಮೇಲ್ಸೇತುವೆ ನಿರ್ಮಾಣ ಕಾಮಗಾರಿಯ ಭೂಸ್ವಾಧೀನ ವೆಚ್ಚಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಮೂಅಇ 91 ರಾರಾಹೆ 2020, ದಿನಾಂಕ: 25.09.2020.
2. ಸರ್ಕಾರದ ಆದೇಶ ಸಂಖ್ಯೆ: ಮೂಅಇ 91 ರಾರಾಹೆ 2020, ದಿನಾಂಕ: 17.03.2022
3. ಲೋಕೋಪಯೋಗಿ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಲೋಇ 7 ಸಿಬಿಆರ್ 2021, ದಿನಾಂಕ:11.08.2021.

*****

ಪ್ರಸ್ತಾವನೆ:

1. ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ ತುಮಕೂರು ರೈಲ್ವೆ ನಿಲ್ದಾಣಗಳ ನಡುವಿನ ಕ್ಯಾತಸಂದ್ರ ಸ್ಟೇಷನ್ ಯಾರ್ಡ್ ನಲ್ಲಿ ಕಿ.ಮೀ. 64/200-300ರಲ್ಲಿ ಬರುವ ರೈಲ್ವೆ ಲೆವೆಲ್ ಕ್ರಾಸಿಂಗ್ ಗೇಟ್ ಸಂಖ್ಯೆ: 37 ರ ಬದಲಿಗೆ ರಸ್ತೆ ಮೇಲ್ಸೇತುವೆ ನಿರ್ಮಿಸಲು ಅಂದಾಜು ವೆಚ್ಚದ ರೂ. 35,43,66,330/- ರಲ್ಲಿ ರೈಲ್ವೆ ಪಾಲು ರೂ.14,89,33,165/- ಹಾಗೂ ರಾಜ್ಯದ ಪಾಲು ರೂ. 20,54,33,165/- ಆಗಿದೆ. ಸದರಿ ಕಾಮಗಾರಿಯನ್ನು ಶೇ.50:50 ವೆಚ್ಚ ಹಂಚಿಕೆ ಆಧಾರದಡಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ತುಮಕೂರು-ಕ್ಯಾತಸಂದ್ರ ಸ್ಟೇಷನ್ ಯಾರ್ಡ್ ನಲ್ಲಿ ಕಿ.ಮೀ. 64/200-300ರಲ್ಲಿ ಬರುವ ರೈಲ್ವೆ ಲೆವೆಲ್ ಕ್ರಾಸಿಂಗ್ ಗೇಟ್ ಸಂಖ್ಯೆ: 37 ರ ಬದಲಿಗೆ ರಸ್ತೆ ಮೇಲ್ಸೇತುವೆ ನಿರ್ಮಿಸಲು ಕಾಮಗಾರಿಗಾಗಿ ರೂ.2,84,00,000/-ಗಳನ್ನು ನೈರುತ್ಯ ರೈಲ್ವೆ ಇಲಾಖೆಗೆ ಬಿಡುಗಡೆ ಮಾಡಲಾಗಿದೆ.

3. ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸಂಪರ್ಕ), ವಿಕಾಸ ಸೌಧ, ಬೆಂಗಳೂರು ಬೆಂಗಳೂರು- ತುಮಕೂರು ರೈಲ್ವೆ ನಿಲ್ದಾಣಗಳ ನಡುವಿನ ಕ್ಯಾತಸಂದ್ರ ಸ್ಟೇಷನ್ ಯಾರ್ಡ್ ನಲ್ಲಿ ಕಿ.ಮೀ. 64/200-300ರಲ್ಲಿ ಬರುವ ರೈಲ್ವೆ ಲೆವೆಲ್ ಕ್ರಾಸಿಂಗ್ ಗೇಟ್ ಸಂಖ್ಯೆ: 37 ರ ಬದಲಿಗೆ ಸಬ್ ವೇಯೊಂದಿಗೆ ರಸ್ತೆ ಮೇಲ್ಸೇತುವೆ ನಿರ್ಮಾಣ ಮಾಡುವ ಕಾಮಗಾರಿಗೆ ರೂ.5.50 ಕೋಟಿಗಳ ಭೂಸ್ವಾಧೀನ ವೆಚ್ಚವನ್ನು ಹಾಗೂ ರೂ.15.00 ಲಕ್ಷಗಳನ್ನು Landscaping ಮತ್ತು tree plantation ವೆಚ್ಚವನ್ನು ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯ ವತಿಯಿಂದ ಭರಿಸುವ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

4. ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ.ಮೂಅಇ 91 ರಾರಾಹೆ 2020

### ಬೆಂಗಳೂರು, ದಿನಾಂಕ :28.03.2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು- ತುಮಕೂರು ರೈಲ್ವೆ ನಿಲ್ದಾಣಗಳ ನಡುವಿನ ಕ್ಯಾತಸಂದ್ರ ಸ್ಟೇಷನ್ ಯಾರ್ಡ್ ನಲ್ಲಿ ಕಿ.ಮೀ. 64/200-300ರಲ್ಲಿ ಬರುವ ರೈಲ್ವೆ ಲೆವೆಲ್ ಕ್ರಾಸಿಂಗ್ ಗೇಟ್ ಸಂಖ್ಯೆ: 37 ರ ಬದಲಿಗೆ ಸಬ್ ವೇಯೊಂದಿಗೆ ರಸ್ತೆ ಮೇಲ್ಸೇತುವೆ ನಿರ್ಮಾಣ ಮಾಡುವ ಕಾಮಗಾರಿಯಲ್ಲಿ ಅಗತ್ಯವಿರುವ

29/03/22

Sr. progmr

....2)

ಭೂಸ್ವಾಧೀನ ವೆಚ್ಚ ಹಾಗೂ Landscaping ಮತ್ತು tree plantation ವೆಚ್ಚಕ್ಕಾಗಿ ರೂ.5,65,00,000/- (ರೂಪಾಯಿ ಐದು ಕೋಟಿ ಅರವತ್ತೈದು ಲಕ್ಷಗಳು ಮಾತ್ರ) ಗಳನ್ನು ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ತುಮಕೂರು ವಿಭಾಗ, ತುಮಕೂರು ಇವರಿಗೆ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

2. ಈ ಮೊತ್ತವನ್ನು 2021-22 ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ **"5465-01-190-3-04-211-ಕೆ-ರೈಡ್ ಮೇಲ್ಸೇತುವೆ /ಕೆಳಸೇತುವೆ ಯೋಜನೆ ಬಂಡವಾಳ ಹೂಡಿಕೆ"** ಅಡಿ ಲಭ್ಯವಿರುವ ಅನುದಾನದಲ್ಲಿ ಭರಿಸತಕ್ಕದ್ದು.

3. ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ತುಮಕೂರು ವಿಭಾಗ, ತುಮಕೂರು ಇವರು ಈ ವೆಚ್ಚಕ್ಕಾಗಿ ಉಪಯೋಗತಾ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

4. ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ:ಆಇ 50 ವೆಚ್ಚ -1/2022, ದಿನಾಂಕ:21.03.2022ರನ್ವಯ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಆಇ 01 ಟಿಎಫ್ ಪಿ 2021, ದಿನಾಂಕ:31.12.2021 ರನ್ವಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಎನ್ ಕಲಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ-I,
ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು
ಒಳನಾಡು ಜಲಸಾರಿಗೆ ಇಲಾಖೆ,

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಆಡಿಟ್-1, 2, 3/ & ಇ), ಪ್ರಧಾನ ಮಹಾಲೇಖಪಾಲರ ಕಛೇರಿ (ಕರ್ನಾಟಕ), ಎ.ಎ.ಡಿ. ಸೆಕ್ಷನ್, ಮೈನ್ ಬಿಲ್ಡಿಂಗ್, ಕೆ.ಪಿ.ಎಸ್.ಸಿ. ಕಛೇರಿ ಎದುರು, ಬೆಂಗಳೂರು.
2. ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ವ್ಯವಸ್ಥಾಪಕರು, ನೈರುತ್ಯ ರೈಲ್ವೆ, ಕೇಶವಪುರ, ಹುಬ್ಬಳ್ಳಿ.
5. ಮುಖ್ಯ ಆಡಳಿತಾಧಿಕಾರಿ (ನಿರ್ಮಾಣ), ನೈರುತ್ಯ ರೈಲ್ವೆ, ನಂ.18, ಮಿಲ್ಲರ್ಸ್ ರಸ್ತೆ, ಬೆಂಗಳೂರು.

6. ಮುಖ್ಯ ಅಭಿಯಂತರರು, ನಿರ್ಮಾಣ (ಉತ್ತರ), ನೈರುತ್ಯ ರೈಲ್ವೆ, ನಂ.18, ಮಿಲ್ಲರ್ಸ್ ರಸ್ತೆ, ಬೆಂಗಳೂರು.
7. ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು
8. ಆಯುಕ್ತರು, ಟಿ.ಎನ್.ಎಂ.ಸಿ. ಖನಿಜ ಭವನ, ಬೆಂಗಳೂರು.
9. ನಿರ್ದೇಶಕರು, ಖಜಾನೆ, ವಿ.ವಿ ಗೋಪುರ, ಬೆಂಗಳೂರು.
10. ಉಪನಿರ್ದೇಶಕರು, ತುಮಕೂರು ಜಿಲ್ಲಾ ಖಜಾನೆ, ತುಮಕೂರು ಜಿಲ್ಲೆ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1)., ವಿಧಾನಸೌಧ, ಬೆಂಗಳೂರು
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
13. ಸರ್ಕಾರದ ಅಪರ ಕಾರ್ಯದರ್ಶಿ (ರೈಲ್ವೆ) ರವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
14. ನಿರ್ದೇಶಕರು, PPP Cell, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
15. ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು.